# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 16.01.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಅನಂತ್ ಕುಮಾರ್ | ಬೆಸ್ಕಾಂ ವಾರ್ಡ್ 71 |
| 4 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 5 | ಲಿಂಗಯ್ಯ | ಕಂದಾಯ ಪರಿವೀಕ್ಷಕರು, ವಾರ್ಡ್ 71 |
| 6 | ಕುಮಾರ್ | ಗುತ್ತಿಗೆದಾರರು, ಬೀದಿದೀಪಗಳ ನಿರ್ವಹಣೆ |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

*****

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿ ವಾರ್ಡ್ 71ರವರು ಮಾತನಾಡಿ ಸ್ವಚ್ಛ ಸರ್ವೇಕ್ಷಣ ಅಭಿಯಾನ 2021 ರ ಬಗ್ಗೆ ಮಾತನಾಡಿ ಬೆಂಗಳೂರು ನಗರಕ್ಕೆ ವೋಟ್ ಮಾಡಿ, ರೇಟಿಂಗ್ ನೀಡುವಂತೆ ಕೋರಿದರು. ಅದಕ್ಕೆ ಸಂಬಂಧಿಸಿದ App and Website link ಗಳನ್ನು ಸಭೆಗೆ ನೀಡಿದರು.

- **<u>ರಸ್ತೆ ಗುಂಡಿಗಳ ನಿರ್ವಹಣೆ ಬಗ್ಗೆ</u>**

  - ಮಂಜುನಾಥ್ ಡಿ.ಎಸ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಲಕ್ಷ್ಮಣ ನಗರದ 1ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, 2ನೇ ಅಡ್ಡರಸ್ತೆ ಹಾಗೂ 5ನೇ ಅಡ್ಡರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿ ಮಾಡಿಕೊಂಡು ವೆಟ್ ಮಿಕ್ಸ್ ಅಳವಡಿಸಲಾಗಿದೆ. ಸಂಜೀವಿನಿ ನಗರ 3ನೇ ಹಂತದಲ್ಲಿ ಓಂ ಶಕ್ತಿ ದೇವಸ್ಥಾನ ರಸ್ತೆ, ಗಣೇಶ ದೇವಸ್ಥಾನದ ರಸ್ತೆಗಳಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ಪಟ್ಟಿ ಮಾಡಿಕೊಂಡಿದ್ದು ಇನ್ನು 2-3 ದಿನಗಳಲ್ಲಿ ಡಾಂಬರು

ಹಾಕಲಾಗುವುದು ಅದಾಗ್ಯೂ ಅಂದಾಜು 150 ಟನ್‌ಗಳಷ್ಟು ಡಾಂಬರು ಮಿಕ್ಸ್ ಬೇಕಾಗಿರುತ್ತದೆ ಎಂದು ತಿಳಿಸಿದರು.

- **ಇನ್ನಿತರ ಸಮಸ್ಯೆಗಳ ಬಗ್ಗೆ:**
  - ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿ ವಾರ್ಡ್ 71ರವರು ಮಾತನಾಡಿ ವಾರ್ಡ್ ಸಮಿತಿ ಸಭೆಯಲ್ಲಿ ಸಾರ್ವಜನಿಕರು ಸಹ ಪಾಲ್ಗೊಳ್ಳುವುದು ಅವಶ್ಯಕವಿದ್ದು, ಸಭೆಯಲ್ಲಿ ಕುಂದು ಕೊರತೆಗಳನ್ನು ತಿಳಿಸಿದರೆ ಸಮಸ್ಯೆಗಳನ್ನು ಪರಿಹರಿಸಲು ಸಹಾಯವಾಗುತ್ತದೆ ಎಂದು ಅಭಿಪ್ರಾಯಿಸಿ ಮುಂದಿನ ಸಭೆಯಲ್ಲಿ ಕುಂದುಕೊರತೆಗಳನ್ನು ತಿಳಿಸಲು ಸಾರ್ವಜನಿಕರ ಪ್ರತಿನಿಧಿಯಾಗಿ ಸ್ಥಳೀಯ ನಾಗರೀಕರನ್ನು ಸಭೆಗೆ ಸದಸ್ಯರನ್ನಾಗಿ ಸೇರಿಸಿಕೊಳ್ಳಲು ಸೂಚಿಸಿದರು.

**BBMP SAHAYA APP:**

- ಮಂಜುನಾಥ್ ಡಿ.ಎಸ್, ಸಹಾಯಕ ಅಭಿಯಂತರರು, ವಾರ್ಡ್ 71 ರವರು ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
- ತ್ರಿವೇಣಿ, ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

➢ ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಡಿ.ಎಸ್.ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ–ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**

**(ಬಿ.ಆರ್ ರವಿಕುಮಾರ್)**
**ನೋಡಲ್ ಅಧಿಕಾರಿ ವಾರ್ಡ್–71**

**ಪ್ರತಿಯನ್ನು:**

1) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ